**ಚಾಸಾಃ 16 ಪ್ರಾಸಾಃ 11**

# ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸುಳ್ಯ, ದ.ಕ

## ಸಿ.ಸಿ ಸಂಖ್ಯೆ: 3/2022

| | |
|---|---|
| ಹೆಸರು | :ಲೋಹಿತ್ ಕೆ |
| ತಂದೆಯ ಹೆಸರು | :ವೆಂಕಪ್ಪ ನಾಯ್ಕ |
| ಪ್ರಾಯ | :33 ವರ್ಷ |
| ಉದ್ಯೋಗ | :ಗ್ರಾಮ ಪಂಚಾಯಿತಿ ಸಿಬ್ಬಂದಿ |
| ವಾಸ | :ಮರ್ಕಂಜ ಗ್ರಾಮ, ಸುಳ್ಯ ತಾಲೂಕು |

**ದಿನಾಂಕ 23.01.2024 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾಗಿ ಪ್ರಮಾಣವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ನಾನು 2011 ರಿಂದ ಇಲ್ಲಿಯವರೆಗೆ ಮರ್ಕಂಜ ಗ್ರಾಮ ಪಂಚಾಯಿತಿಯಲ್ಲಿ ಸ್ವಚ್ಛತಾಗಾರನಾಗಿ ಕರ್ತವ್ಯ ನಿರ್ವಹಿಸಿಕೊಂಡಿರುತ್ತೇನೆ.

ದಿಃ 20.7.2011 ರಂದು ನಮ್ಮ ಗ್ರಾಮ ಪಂಚಾಯಿತಿಯ ಕಾರ್ಯದರ್ಶಿಯಾದ ಸುಂದರ ಪೂಜಾರಿಯವರ ಜೊತೆ ಗ್ರಾಮ ಪಂಚಾಯಿತಿಯ ದಾಖಲೆಗಳನ್ನು ಪೊಲೀಸರ ಮುಂದೆ ಹಾಜರು ಪಡಿಸಲು ಪೊಲೀಸ್ ಠಾಣೆಗೆ ಹೋಗಿದ್ದು, ಅಲ್ಲಿ ಪೊಲೀಸರು ಸದರಿ ದಾಖಲೆಗಳನ್ನು ಮಹಜರು ಮೂಲಕ ಪಡೆದುಕೊಂಡಿರುತ್ತಾರೆ. ಸದರಿ ದಾಖಲೆಗಳ ಪೈಕಿ ಎಂ.ಬಿ ಪುಸ್ತಕ, ಬಿಲ್ ರಿಜಿಸ್ಟರ್, ಸಭಾ ನಡಾವಳಿ ಮತ್ತು ಬಿಲ್ಲುಗಳು ಇದ್ದವು. ಸದರಿ ಪಂಚನಾಮೆಗೆ ನಾನು ಸಹಿ ಮಾಡಿರುತ್ತೇನೆ.

ಆ ದಿನ ಬೆಳಿಗ್ಗೆ 10 ಗಂಟೆಯಿಂದ 3 ಗಂಟೆಯವರೆಗೆ ಪಂಚನಾಮೆ ಮಾಡಿರುತ್ತಾರೆ ಸದರಿ ಪಂಚನಾಮೆಯ ದೃಢೀಕೃತ ನಕಲನ್ನು ಈಗ ನ್ಯಾಯಾಲಯದ ಮುಂದೆ

ನೋಡುತ್ತಿದ್ದು ಅದನ್ನು ನಿಪಿ-3 ಎಂದು ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಆ ದಿನ ನನ್ನ ಜೊತೆ ಶಿವರಾಮ ಮತ್ತು ಸುಂದರ ಪೂಜಾರಿಯವರು ಇದ್ದರು. ಆ ದಿನ ಪೊಲೀಸರು ಅಮಾನತು ಪಡಿಸಿಕೊಂಡ ದಾಖಲೆಗಳನ್ನು ನಾನು ನೋಡಿದರೆ ಗುರುತಿಸುತ್ತೇನೆ. (ಸದರಿ ದಾಖಲೆಗಳನ್ನು ಈಗಾಗಲೇ ಪ್ರಕರಣ ಸಂಃ 348/2015 ರಲ್ಲಿ ಗುರುತಿಲಾಗಿದೆ.)

**<u>ಪಾಟೀ ಸವಾಲುಃ 1 ನೇ ಆರೋಪಿ ಪರ ಶ್ರೀ ಎನ್.ಕೆ ವಕೀಲರಿಂದಃ</u>**

ನಾನು ಮರ್ಕಂಜ ಗ್ರಾಮ ಪಂಚಾಯಿತಿಯಲ್ಲಿ ಸ್ವಚ್ಛತಾಗಾರನಾಗಿ ಕೆಲಸ ಮಾಡುತ್ತಿದ್ದೆ. ನಾನು ಪಿ.ಯು.ಸಿ ವರೆಗೆ ವಿದ್ಯಾಭ್ಯಾಸ ಮಾಡಿರುತ್ತೇನೆ. ಪಂಚಾಯಿತಿಯಲ್ಲಿ ಯಾವ ಯಾವ ದಾಖಲೆಗಳನ್ನು ಇಟ್ಟಿರುತ್ತಾರೆ ಎಂಬ ಬಗ್ಗೆ ನನಗೆ ಗೊತ್ತಿರುತ್ತದೆ. ನಾನು 2010 ರಲ್ಲಿ ಕೆಲಸಕ್ಕೆ ಸೇರಿರುತ್ತೇನೆ. 2011 ರಲ್ಲಿ ನನಗೆ ಪಂಚಾಯಿತಿಯ ದಾಖಲೆಗಳ ಬಗ್ಗೆ ಗೊತ್ತಿರಲಿಲ್ಲ ಎಂದರೆ ಸರಿ. ಸುಂದರ ಪೂಜಾರಿಯವರು ಪೊಲೀಸರಿಗೆ ದಾಖಲೆಗಳನ್ನು ಕೊಡುವಂತೆ ಹೇಳಿದ್ದು ಆ ಪ್ರಕಾರ ನಾನು ಪೊಲೀಸರಿಗೆ ಸದರಿ ದಾಖಲೆಗಳನ್ನು ಕೊಟ್ಟಿರುತ್ತೇನೆ ಮತ್ತು ಪೊಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ಅದು ಯಾವ ಯಾವ ಪುಸ್ತಕಗಳು ಮತ್ತು ದಾಖಲೆಗಳು ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ನಾನು ಈಗ ಪಂಚಾಯಿತಿಯಲ್ಲಿ ಕೆಲಸ ಮಾಡುತ್ತಿಲ್ಲ. ನಾನು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

(2 ಮತ್ತು 3 ನೇ ಆರೋಪಿತರ ಪರ ವಕೀಲರು ಮೇಲಿನ ಪಾಟೀ ಸವಾಲನ್ನು ಅವಲಂಬಿಸಿರುತ್ತಾರೆ.)

**ಮರುವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

**(ಸಾ.ಓ.ಹೇ.ಕೇ.ಸ.ಇ.ಎ.ಒ)**

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ. ಸುಳ್ಯ